(41)

# ಕರ್ನಾಟಕ ವಿಧಾನ ಪರಿಷತ್ತು

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಶಾಂತಾರಾಮ್‌ಬುಡ್ನ ಸಿದ್ದಿ ರವರ ಗಮನ ಸೆಳೆಯುವ ಸೂಚನೆ ನಿಯಮ 72ಕ್ಕೆ ಉತ್ತರ.**

**ಸೂಚನೆ:-**

ಉತ್ತರ ಕನ್ನಡ ಜಿಲ್ಲೆಯಲ್ಲಿ ವಾಸಿಸುವ ಬುಡಕಟ್ಟು ಸಿದ್ದಿ ಜನಾಂಗವು 2003ನೇ ಇಸವಿಯಲ್ಲಿ ಪರಿಶಿಷ್ಟ ಪಂಗಡಕ್ಕೆ ಸೇರ್ಪಡೆಗೊಂಡಿದ್ದರೂ ಕೂಡ ಅನೇಕ ಸಮಸ್ಯೆಗಳನ್ನು ಎದುರಿಸುತ್ತಿದೆ. ಬುಡಕಟ್ಟು ಸಿದ್ದಿ ಜನಾಂಗದವರಿಗೆ ಅರಣ್ಯ ಹಕ್ಕು ಕಾಯ್ದೆಯಡಿ ಕೆಲವರಿಗೆ ಹಕ್ಕು ಪತ್ರಗಳನ್ನು ನೀಡಿದ್ದರೂ ಸಹ ಅವರು ಸಾಗುವಳಿ ಮಾಡುತ್ತಿದ್ದ ಭೂಮಿಗೆ ದಾಖಲೆಗಳನ್ನು ನೀಡಿದಷ್ಟು ಜಮೀನಿಗೆ ಹಕ್ಕುಪತ್ರ ನೀಡಿರುವುದಿಲ್ಲ, ಹಕ್ಕು ಪತ್ರ ನೀಡಿದವರಿಗೆ RTC ನೀಡಿರುವುದಿಲ್ಲ. ಸಿದ್ದಿ ಜನಾಂಗದ ಮಕ್ಕಳಿಗೆ ವಿದ್ಯಾರ್ಥಿ ವೇತನಕ್ಕೆ ಅರ್ಜಿ ಸಲ್ಲಿಸುವಾಗ ಅನೇಕ ಸಮಸ್ಯೆಗಳು ಬರುತ್ತಿವೆ. ಬುಡಕಟ್ಟುಗಳಿಗಾಗಿ ಇರುವ ನಿಗಮಗಳಲ್ಲಿ ಪರಿಶಿಷ್ಟ ಪಂಗಡದ ಬದಲು ಅರೆ ಅಲೆಮಾರಿ ಪಟ್ಟಿಯಲ್ಲಿ ಇರುವುದರಿಂದ ಸರಕಾರದ ಅನೇಕ ಯೋಜನೆಗಳ ಸೌಲಭ್ಯ ಪಡೆಯಲು ಸಾಧ್ಯವಾಗುತ್ತಿಲ್ಲ. ಹೆಚ್ಚಿನ ಕುಟುಂಬಗಳು ಅರಣ್ಯ ಪ್ರದೇಶದಲ್ಲಿ ವಾಸಿಸುವುದರಿಂದ ಅನೇಕ ಮನೆಗಳು ದುರ್ಬಲ ಸ್ಥಿತಿಯಲ್ಲಿವೆ. ಹೀಗಾಗಿ ಬುಡಕಟ್ಟು ಸಿದ್ದಿ ಸಮುದಾಯದವರ ಅನೇಕ ಮೂಲಭೂತ ಸಮಸ್ಯೆಗಳ ಕುರಿತು ನಿಯಮ 72ರ ಅಡಿಯಲ್ಲಿ ಸನ್ಮಾನ್ಯ ಮುಖ್ಯಮಂತ್ರಿಗಳ ಗಮನವನ್ನು ಸೆಳೆಯಲು ಬಯಸುತ್ತೇನೆ.

**ಉತ್ತರ:-**

1. ಮೂಲತ: ಉತ್ತರ ಕನ್ನಡ ಜಿಲ್ಲೆಯಲ್ಲಿ ವಾಸಿಸುತ್ತಿದ್ದ ಸಿದ್ದಿ ಜನಾಂಗವನ್ನು ಮಾತ್ರ ಪರಿಶಿಷ್ಟ ಪಂಗಡದಲ್ಲಿ ಸೇರಿಸಲಾಗಿತ್ತು. ನಂತರ ಕೇಂದ್ರ ಸರ್ಕಾರಕ್ಕೆ ಶಿಫಾರಸ್ಸು ಮಾಡಿ ಬೆಳಗಾವಿ ಮತ್ತು ಧಾರವಾಡ ಜಿಲ್ಲೆಯಲ್ಲಿ ವಾಸಿಸುತ್ತಿರುವ ಸಿದ್ದಿ ಜನಾಂಗವನ್ನು ಪರಿಶಿಷ್ಟ ಪಂಗಡದಲ್ಲಿ ಸೇರಿಸಲಾಗಿದೆ. 2011ರ ಜನಗಣತಿ ರನ್ವಯ ಸಿದ್ದಿ ಜನಾಂಗದ ಜನಸಂಖ್ಯೆ:10477 ಆಗಿರುತ್ತದೆ.

2. ಗ್ರಾಮ ಅರಣ್ಯ ಹಕ್ಕು ಸಮಿತಿಯಲ್ಲಿ ಅರ್ಹವಿರುವ ಅರ್ಜಿದಾರರಿಗೆ ಅರಣ್ಯ ಭೂಮಿಗೆ ಅನುಗುಣವಾಗಿ ಭೂಮಿಯನ್ನು ಮಂಜೂರು ಮಾಡಲು ಉಪವಿಭಾಗ ಅರಣ್ಯ ಹಕ್ಕು ಸಮಿತಿಗೆ ಶಿಫಾರಸ್ಸು ಮಾಡುತ್ತಾರೆ. ಸದರಿ ಸಮಿತಿಯು ಪರಿಶೀಲಿಸಿ ಜಿಲ್ಲಾಮಟ್ಟದ ಅರಣ್ಯ ಹಕ್ಕು ಸಮಿತಿಗೆ ಶಿಫಾರಸ್ಸು ಮಾಡುತ್ತಾರೆ. ಜಿಲ್ಲಾ ಮಟ್ಟದ ಅರಣ್ಯ ಹಕ್ಕು ಸಮಿತಿಯು ಅರ್ಹತೆಗೆ ಅನುಗುಣವಾಗಿ ವಿಸ್ತೀರ್ಣವನ್ನು ನಿಗಧಿಮಾಡಿ ಅರಣ್ಯ ಹಕ್ಕು ಪತ್ರ ನೀಡಲಾಗುತ್ತಿದೆ.

   ಉತ್ತರ ಕನ್ನಡ ಜಿಲ್ಲೆಯಲ್ಲಿ ಅರಣ್ಯ ಹಕ್ಕು ಕಾಯ್ದೆಯಡಿ ಸಿದ್ದಿ ಜನಾಂಗದ 954 ಅರ್ಜಿದಾರರಿಗೆ ಜಿಲ್ಲಾ ಮಟ್ಟದ ಅರಣ್ಯ ಹಕ್ಕು ಸಮಿತಿಯಲ್ಲಿ ಅನುಮೋದಿಸಿದ ನಂತರ ಹಕ್ಕು ಪತ್ರ ನೀಡಲಾಗಿರುತ್ತದೆ. ಈವರೆಗೂ ನೀಡಿರುವ 954 ಅರಣ್ಯ ಹಕ್ಕು ಪತ್ರಗಳಲ್ಲಿ 757 ಅರ್ಜಿದಾರರ ವಿವರವನ್ನು ಆರ್.ಟಿ.ಸಿ. ಕಲಂ 11 ರಲ್ಲಿ ನೋಂದಣಿ ಮಾಡಲಾಗಿರುತ್ತದೆ. ಇನ್ನುಳಿದ 197 ಅರ್ಜಿದಾರರ ವಿವರವನ್ನು ಆರ್.ಟಿ.ಸಿ. ಕಲಂ 11 ರಲ್ಲಿ ನೋಂದಣಿ ಮಾಡುವ ಪ್ರಕ್ರಿಯೆ ಚಾಲ್ತಿಯಲ್ಲಿದೆ.

....2

3. ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶ (SSP)ದಲ್ಲಿ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳು ವಿದ್ಯಾರ್ಥಿವೇತನಕ್ಕೆ ಅರ್ಜಿ ಸಲ್ಲಿಸಲು ಆನ್‌ಲೈನ್ ವ್ಯವಸ್ಥೆ ಕಲ್ಪಿಸಲಾಗಿದೆ. ಅರ್ಜಿ ಸಲ್ಲಿಸಲು ಏನಾದರೂ ತೊಡಕುಗಳು ಉದ್ಭವಿಸಿದಲ್ಲಿ ಅಂತಹ ವಿದ್ಯಾರ್ಥಿಗಳು ದಾಖಲಾತಿಗಳನ್ನು ಜಿಲ್ಲಾ/ತಾಲ್ಲೂಕು ಮಟ್ಟದ ಅಧಿಕಾರಿಗಳಿಗೆ ಸಲ್ಲಿಸಿದಲ್ಲಿ ಸಂಬಂಧಪಟ್ಟ ಕಛೇರಿ ಸಿಬ್ಬಂದಿಗಳು ವಿದ್ಯಾರ್ಥಿಗಳ ಪರವಾಗಿ ಅರ್ಜಿಗಳನ್ನು ಆನ್‌ಲೈನ್‌ನಲ್ಲಿ ಸಲ್ಲಿಸುವ ಮೂಲಕ ವಿದ್ಯಾರ್ಥಿಗಳಿಗೆ ಅನುಕೂಲ ಮಾಡಿಕೊಡಲಾಗುತ್ತಿದೆ.

4. ಮುಂದುವರಿದು ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶದಲ್ಲಿ (SSP) ವಿದ್ಯಾರ್ಥಿವೇತನಕ್ಕಾಗಿ ಅರ್ಜಿ ಸಲ್ಲಿಸುವ ಪ್ರಕ್ರಿಯೆ ಬಗ್ಗೆ ಕಾಲೇಜು ಪ್ರಾಂಶುಪಾಲರು/ಸಿಬ್ಬಂದಿಗಳಿಗೆ ತರಬೇತಿಯನ್ನು ನೀಡಲಾಗುತ್ತಿದ್ದು, ವಿದ್ಯಾರ್ಥಿಗಳ ಸಮಸ್ಯೆಗಳನ್ನು ಸಂಬಂಧಪಟ್ಟ ಕಾಲೇಜಿನ ಸಿಬ್ಬಂದಿಗಳೇ ಪರಿಹರಿಸುತ್ತಾರೆ. ಜೊತೆಗೆ ರಾಜ್ಯಮಟ್ಟದಲ್ಲಿ ಸಹಾಯವಾಣಿ (Call Centre) ಕೇಂದ್ರವನ್ನು ಸಹ ಸ್ಥಾಪಿಸಿ ವಿದ್ಯಾರ್ಥಿಗಳ ಸಮಸ್ಯೆಗಳಿಗೆ ಪರಿಹಾರ ನೀಡಲಾಗುತ್ತಿದೆ.

5. ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳು ಆನ್‌ಲೈನ್ ಮೂಲಕ ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನಕ್ಕಾಗಿ https://ssp.karnataka.gov.in/ssp2324/homepage.aspx ಹಾಗೂ ಮೆಟ್ರಿಕ್ ನಂತರ ವಿದ್ಯಾರ್ಥಿವೇತನಕ್ಕಾಗಿ https://ssp.postmatric.karnataka.gov.in ವೆಬ್‌ಸೈಟ್‌ನಲ್ಲಿ ಅರ್ಜಿ ಸಲ್ಲಿಸಬಹುದಾಗಿರುತ್ತದೆ. ಈ ಸಂಬಂಧ ದಿನಪತ್ರಿಕೆಗಳಲ್ಲಿ ಪ್ರಚಾರ ನೀಡಿ ಮೆಟ್ರಿಕ್ ಪೂರ್ವ/ನಂತರದ ವಿದ್ಯಾರ್ಥಿ ವೇತನಕ್ಕಾಗಿ ಅರ್ಜಿ ಸಲ್ಲಿಸಲು ವಿದ್ಯಾರ್ಥಿಗಳಲ್ಲಿ ಜಾಗೃತಿಯನ್ನು ಮೂಡಿಸಲಾಗುತ್ತಿದೆ.

6. ಉತ್ತರ ಕನ್ನಡ ಜಿಲ್ಲೆಗೆ ಸಂಬಂಧಿಸಿದಂತೆ 2023-24ನೇ ಸಾಲಿನಲ್ಲಿ ಮೆಟ್ರಿಕ್ ಪೂರ್ವ (1 ರಿಂದ 10ನೇ ತರಗತಿ) ವಿದ್ಯಾರ್ಥಿವೇತನಕ್ಕಾಗಿ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳ 2427 ಅರ್ಜಿಗಳಿಗೆ ಅನುಮೋದನೆ ನೀಡಿ, ರೂ.35.24 ಲಕ್ಷಗಳನ್ನು ಹಾಗೂ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನಕ್ಕಾಗಿ 559 ಅರ್ಜಿಗಳಿಗೆ ಅನುಮೋದನೆ ನೀಡಿ, ರೂ.54.55 ಲಕ್ಷಗಳ ಅನುದಾನವನ್ನು ಡಿಬಿಟಿ ತಂತ್ರಾಂಶದ ಮೂಲಕ ನೇರವಾಗಿ ವಿದ್ಯಾರ್ಥಿಗಳ ಬ್ಯಾಂಕ್ ಖಾತೆಗೆ ಜಮೆ ಮಾಡಲಾಗಿರುತ್ತದೆ. (ವಿದ್ಯಾರ್ಥಿ ವೇತನವನ್ನು ಜಾತಿವಾರು ಮಂಜೂರು ಮಾಡುತ್ತಿಲ್ಲ)

7. ಸರ್ಕಾರದ ಆದೇಶ ಸಂಖ್ಯೆ: ಸಕಇ 90 ಎಸ್‌ಡಿಸಿ 2021, ದಿನಾಂಕ:17.12.2022 ರನ್ವಯ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ವರ್ಗಗಳ ಅಲೆಮಾರಿ, ಅರೆ ಅಲೆಮಾರಿ, ಸೂಕ್ಷ್ಮ ಮತ್ತು ಅತಿಸೂಕ್ಷ್ಮ ಸಮುದಾಯಗಳಿಗೆ ವಿಶೇಶ ಕಾಳಜಿ ವಹಿಸುವ ಉದ್ದೇಶದಿಂದ ರಾಜ್ಯ ಸರ್ಕಾರದ ಸಾಮಾಜಿಕ, ಶೈಕ್ಷಣಿಕ ಮತ್ತು ಆರ್ಥಿಕ ಸವಲತ್ತುಗಳನ್ನು ಒದಗಿಸಲು ಹಾಗೂ ಕೇಂದ್ರ ಸರ್ಕಾರದ The Development and Welfare Board for de-notified, Nomadic and Semi Nomadic Communities ಮಾದರಿಯಲ್ಲಿ ಸದರಿ ಕಾರ್ಯಕ್ರಮಗಳನ್ನು ಯಶಸ್ವಿಯಾಗಿ ಅನುಷ್ಠಾನಗೊಳಿಸಲು ಪ್ರತ್ಯೇಕವಾಗಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಅಲೆಮಾರಿ ಅಭಿವೃದ್ಧಿ ನಿಗಮವನ್ನು ಸ್ಥಾಪಿಸುವ ಮೂಲಕ ಎಲ್ಲಾ ರೀತಿಯ ಅಭಿವೃದ್ಧಿಗೆ ಸಹಾಯ ಮತ್ತು ಸಹಕಾರವನ್ನು ನೀಡಲಾಗುತ್ತಿದೆ. 2023-24ನೇ ಸಾಲಿನಲ್ಲಿ ಸದರಿ ಸಮುದಾಯಗಳ ಸಮಗ್ರ ಅಭಿವೃದ್ಧಿಗಾಗಿ ಕರ್ನಾಟಕ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಅಲೆಮಾರಿ ಅಭಿವೃದ್ಧಿ ನಿಗಮಕ್ಕೆ ರೂ.1800.00 ಲಕ್ಷಗಳ ಅನುದಾನವನ್ನು ಬಿಡುಗಡೆ ಮಾಡಲಾಗಿದೆ.

....3

8. 2023-24ನೇ ಸಾಲಿನಿಂದ ಸಿದ್ದಿ ಸಮುದಾಯ ಒಳಗೊಂಡಂತೆ ಪರಿಶಿಷ್ಟ ಪಂಗಡದ ಅಲೆಮಾರಿ, ಅರೆ ಅಲೆಮಾರಿ, ಸೂಕ್ಷ್ಮ ಮತ್ತು ಅತಿ ಸೂಕ್ಷ್ಮ ಸಮುದಾಯಗಳ ಆರ್ಥಿಕಾಭಿವೃದ್ಧಿ ಕಾರ್ಯಕ್ರಮಗಳಿಗೆ ಸಹಾಯ ಧನ ಒದಗಿಸಲು ನಿಗಮವು ಸೇವಾಸಿಂಧು ಪೋರ್ಟಲ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗುತ್ತಿದೆ.

9. ಸಿದ್ದಿ ಜನಾಂಗವು ಕ್ರೀಡೆಗಳಲ್ಲಿ ಭಾಗವಹಿಸುವಂತೆ ಪ್ರೋತ್ಸಾಹಿಸಲು ಪ್ರತ್ಯೇಕವಾಗಿ ತಲಾ 50 ಕ್ರೀಡಾಪಟುಗಳಿಗೆ ಉತ್ತರ ಕನ್ನಡ ಜಿಲ್ಲೆಯ ಹಳಿಯಾಳ ಹಾಗೂ ಬೆಂಗಳೂರಿನ ವಿದ್ಯಾನಗರ ಕ್ರೀಡಾ ವಸತಿ ಶಾಲೆ/ ನಿಲಯದಲ್ಲಿ ವಾಸ್ತವ್ಯ ಹಾಗೂ ಕ್ರೀಡಾ ತರಬೇತಿಯನ್ನು ನೀಡಲಾಗಿರುತ್ತದೆ. ಈ ಕ್ರೀಡಾಪಟುಗಳಿಗೆ ಉಚಿತ ಕ್ರೀಡಾ ತರಬೇತಿ, ವಸತಿ, ಊಟೋಪಚಾರ, ಕ್ರೀಡಾ ಸಾಮಗ್ರಿ, ಕ್ರೀಡಾ ಕಲರ್ಸ್ ಹಾಗೂ 8ನೇ ತರಗತಿಯಿಂದ 10ನೇ ತರಗತಿಯವರೆಗೂ ಉಚಿತ ಶಾಲಾ ಶಿಕ್ಷಣ ವ್ಯವಸ್ಥೆ, ವೈದ್ಯಕೀಯ ವ್ಯವಸ್ಥೆಯನ್ನು ನೀಡಲಾಗುತ್ತಿದೆ.

10. ಪರಿಶಿಷ್ಟ ಪಂಗಡದ ಸಮುದಾಯದವರಿಗೆ ಮನೆಗಳನ್ನು ನಿರ್ಮಿಸಲು TSP ಯೋಜನೆಯಡಿ ರಾಜೀವಗಾಂಧಿ ವಸತಿ ನಿಗಮ ನಿಯಮಿತ ರವರಿಗೆ ಅನುದಾನ ಬಿಡುಗಡೆ ಮಾಡಲಾಗಿರುತ್ತದೆ. ಸದರಿ ಅನುದಾನದಲ್ಲಿ ಸಿದ್ದಿ ಜನಾಂಗದವರಿಗೆ ಮನೆಗಳನ್ನು ನಿರ್ಮಾಣ ಮಾಡಲು ಮಂಜೂರಾತಿ ನೀಡಲಾಗುತ್ತಿದೆ.

STW/SECB/SAD/114/2024

(ಸಿದ್ದರಾಮಯ್ಯ)
ಮುಖ್ಯಮಂತ್ರಿ